ಕರ್ನಾಟಕ ಸರ್ಕಾರ

ಸಂ:ಎಎಲ್‌ಎನ್(ಎ)(ಎಸ್):ಎಸ್‌ಆರ್: 279/2013–14

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 08–05–2014.

## ಅಧಿಕೃತ ಜ್ಞಾಪನ

ವಿಷಯ:– ಬೆಂಗಳೂರು ಜಿಲ್ಲೆ, **ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ,** ಕಾಡಅಗ್ರಹಾರ ಗ್ರಾಮದ **ಸರ್ವೆ ನಂ..24/1 ರಲ್ಲಿ 0–12 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ** ಭೂ ಪರಿವರ್ತನೆಗಾಗಿ **ಶ್ರೀಮತಿ ವಿನೋದ ಕೋಂ ಶಿವಪ್ಪ ರೆಡ್ಡಿ ಕಾಡಅಗ್ರಹಾರ ಗ್ರಾಮ, ಸರ್ಜಾಪುರ ಹೋಬಳಿ, ಅನೇಕಲ್** ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ: 19–02–2014.

ಉಲ್ಲೇಖ:–
1) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7–6–1999.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3) **ತಹಶೀಲ್ದಾರ್, ಆನೇಕಲ್** ತಾಲ್ಲೂಕು ರವರ ವರದಿ ಸಂಖ್ಯೆ: ಎಎಲ್‌ಎನ್:(ಎಸ್) ಸಿಆರ್: 473/2013–14 ದಿನಾಂಕ 25–02–2014.
4) ಭೂ ಪರಿವರ್ತನಾ ಶುಲ್ಕ ರೂ 16,335–00 ಹಾಗೂ ಪೋಡಿ ಶುಲ್ಕ ರೂ.55–00 **ಒಟ್ಟು ರೂ.16,390–00** ಗಳನ್ನು ಚಲನ್ ನಂ.80 ದಿನಾಂಕ: 28–04–2014 ರಂದು ಎಸ್.ಬಿ.ಎಂ. ಆನೇಕಲ್ ರಂತೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ,"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು–99 ರವರ ಪತ್ರದ ಸಂಖ್ಯೆ: ಆಯೋಪ್ರಾ/ ಭೂ.ಪ.ಅ 996,997,1013,10058,1010/2013–14 ದಿನಾಂಕ: 06–03–2014

***

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450–00 ( ಐವತ್ನಾಲ್ಕು ಸಾವಿರದ ನಾಲ್ಕು ನೂರಾ ಐವತ್ತು ಮಾತ್ರ ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ **ಶ್ರೀಮತಿ ವಿನೋದ ಕೋಂ ಶಿವಪ್ಪ ರೆಡ್ಡಿ ಕಾಡಅಗ್ರಹಾರ ಗ್ರಾಮ, ಸರ್ಜಾಪುರ ಹೋಬಳಿ, ಆನೇಕಲ್ ತಾಲ್ಲೂಕು** ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಜಿಲ್ಲೆ, **ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ,** ಕಾಡಅಗ್ರಹಾರ ಗ್ರಾಮದ ಸರ್ವೆ ನಂ..24/1 ರಲ್ಲಿ **0–12 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ** ಭೂ ಪರಿವರ್ತನೆಗಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೊಂದಣಾಧಿಕಾರಿಗಳಿಂದ ಉಪನೊಂದಣಾಧಿಕಾರಿಗಳಿಂದ ನೊಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶದ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಸ.ನಂ.24/4 ರಲ್ಲಿ 0–01.08 ಗುಂಟೆ ಕಾಲು ದಾರಿ ಬಗ್ಗೆ ಬಿ. ಖರಾಬು ಇದ್ದು, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

..3.

17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

<u>ಷೆಡ್ಯೂಲ್ ವಿವರ</u>

ಬೆಂಗಳೂರು ಜಿಲ್ಲೆ, **ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಕಾಡಅಗ್ರಹಾರ ಗ್ರಾಮದ ಸರ್ವೆ ನಂ.24/1** ರಲ್ಲಿ 0-12 ಗುಂಟೆ **ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ** ಭೂ ಪರಿವರ್ತನೆಗಾಗಿ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

<u>-:ಚೆಕ್ಕುಬಂದಿ :-</u>

| ಸ.ನಂ. | ವಿಸ್ತೀರ್ಣ ಎ-ಗುಂಟೆ | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|---|
| 24/1 | 0-12 | ಸ.ನಂ.24/4 | ಸ.ನಂ.25 | ಸ.ನಂ.33 | ಸ.ನಂ.24/2 |

ಸಹಿ/-

(ಡಾ: ಜಿ.ಸಿ. ಪ್ರಕಾಶ್),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u> ಚಲನ್‌ದೊಂದಿಗೆ ಕಳುಹಿಸುತ್ತಾ

1) ತಹಶೀಲ್ದಾರರು, ಆನೇಕಲ್ ತಾಲ್ಲೂಕು, ಆನೇಕಲ್ ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸತಕ್ಕದ್ದು.
2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ,"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-99 ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಸರ್ಜಾಪುರ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾ ಕಳುಹಿಸಿದೆ.
6) ಅರ್ಜಿದಾರರಾದ **ಶ್ರೀಮತಿ ವಿನೋದ ಕೋಂ ಶಿವಪ್ಪ ರೆಡ್ಡಿ ಕಾಡಅಗ್ರಹಾರ ಗ್ರಾಮ, ಸರ್ಜಾಪುರ ಹೋಬಳಿ, ಆನೇಕಲ್** ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.